## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕನಕಪುರ ವ್ಯಾಪ್ತಿಯಲ್ಲಿ ಕೊಳ್ಳಿಗನಹಳ್ಳಿ ಗ್ರಾಮದಲ್ಲಿ ಓವರ್ ಹೆಡ್ ಟ್ಯಾಂಕ್‌ಗೆ ಸಂಬಂಧಪಟ್ಟಂತೆ ಕೊರೆದ ಕೊಳವೆ ಬಾವಿಯನ್ನು ಆಳವನ್ನು ಹೆಚ್ಚಿಗೆ ನಮೂದಿಸಿ, ಹಣ ಪಾವತಿಸಿರುವ ಬಗ್ಗೆ ಆರೋಪ, ಪ್ರಕರಣವನ್ನು ವಿವರವಾದ ಇಲಾಖೆ ವಿಚಾರಣೆಗೆ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಬಗ್ಗೆ ಆದೇಶ.

**ಓದಲಾಗಿದೆ:**

| | |
|---|---|
| 1. | ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ಇವರ ಅ.ಸ.ಪ.ಸಂಖ್ಯೆ:ಕಂಪ್ಲೇಟ್/ಉಪಲೋಕ್/ಬಿಡಿ-687/2015/ಡಿಆರ್‌ಇ-5. ದಿನಾಂಕ:24.5.2017 |
| 2. | ಮಾನ್ಯ ಉಪ ಲೋಕಾಯುಕ್ತರವರ ಲೋಕಾಯುಕ್ತ ಕಾಯ್ದೆ ಕಲಂ 12(3) ರನ್ವಯ ವರದಿ ಸಂಖ್ಯೆ: ಕಂಪ್ಲೇಟ್/ಉಪಲೋಕ್/ಬಿಡಿ-687/2015/ಡಿಆರ್‌ಇ-5. ದಿನಾಂಕ:20.5.2017 |

**ಪ್ರಸ್ತಾವನೆ:-**

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ರವರು ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ದಿನಾಂಕ:24.5.2017 ರ ಅರೆ ಸರ್ಕಾರಿ ಪತ್ರದ ಜೊತೆ ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ಮಾನ್ಯ ಉಪ ಲೋಕಾಯುಕ್ತರವರ ದಿನಾಂಕ:20.5.2017 ರ ಲೋಕಾಯುಕ್ತ ಕಾಯ್ದೆಯ ಕಲಂ 12(3)ರ ವರದಿ ಹಾಗೂ ಇತರೆ ದಾಖಲೆಗಳನ್ನು ಲಗತ್ತಿಸಿ, ಸರ್ಕಾರಕ್ಕೆ ಕಳುಹಿಸಿ ಮಾನ್ಯ ಉಪ ಲೋಕಾಯುಕ್ತರವರ ವರದಿಯನುಸಾರ ಕೂಡಲೇ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ಕೆ.ವಿ.ರಾಜಶೇಖರ್, ಕೊಳ್ಳಿಗನಹಳ್ಳಿ ಗ್ರಾಮ, ಕನಕಪುರ ಇವರು ಲೋಕಾಯುಕ್ತ ಕಛೇರಿಗೆ ದೂರನ್ನು ಸಲ್ಲಿಸಿ, ಶ್ರೀ ಚಿಕ್ಕರಾಜಣ್ಣ, ಕಿರಿಯ ಇಂಜಿನಿಯರ್, ಪಂ.ರಾ.ಇಂ ಉಪವಿಭಾಗ, ಕನಕಪುರ ಇವರು ಕೊಳ್ಳಿಗನಹಳ್ಳಿ ಗ್ರಾಮದಲ್ಲಿನ ಓವರ್ ಹೆಡ್ ಟ್ಯಾಂಕ್‌ಗೆ ಸಂಬಂದಪಟ್ಟಂತೆ 250 ಅಡಿ ಕೊಳವೆ ಬಾವಿಯನ್ನು ಕೊರೆಯಿಸಿದ್ದು, 650 ಅಡಿ ನಮೂದಿಸಿ, ಬಿಲ್ ಪಾವತಿಸಿರುತ್ತಾರೆ ಎಂದು ಆರೋಪಿಸಿ, ಅವರ ವಿರುದ್ಧ ಕ್ರಮ ಕೈಗೊಳ್ಳಲು ಕೋರಿರುತ್ತಾರೆ.

ಸದರಿ ದೂರಿನ ಸಂಬಂಧವಾಗಿ ಮಾನ್ಯ ಉಪಲೋಕಾಯುಕ್ತರು ಪೊಲೀಸ್ ಅಧೀಕ್ಷಕರು, ರಾಮನಗರ ಇವರಿಂದ ತನಿಖೆ ನಡೆಸಿ ವರದಿ ಪಡೆದಿರುತ್ತಾರೆ. ಸದರಿ ತನಿಖಾ ವರದಿಯನುಸಾರ ಕೊಳವೆ ಬಾವಿಯ ವಾಸ್ತವ ಆಳ 144.20 ಮೀಟರ್ ಇದ್ದು ಅಳತೆ ಪುಸ್ತಕದಲ್ಲಿ 167.68 ಮೀಟರ್ ನಮೂದಿಸಿ, 23.48 ಮೀಟರ್‌ಗೆ ಹೆಚ್ಚಿನ ಹಣ ಪಾವತಿಸಲಾಗಿದೆಯೆಂದು ಈ ಕುರಿತು ಅಪಾದಿತರಿಂದ ಹೇಳಿಕೆ ಪಡೆಯಲಾಗಿ, ಕೊಳವೆ ಭಾವಿ ಕೊರೆದು ಸುಮಾರು 5 ವರ್ಷಗಳು ಕಳೆದಿದ್ದು, ಹೂಳು, ಸಣ್ಣ ಕಲ್ಲುಗಳು ಶೇಖರಣೆಯಾಗಿರುವ ಸಾಧ್ಯತೆ ಇರುತ್ತದೆಯೆಂದು ತಿಳಿಸಿರುತ್ತಾರೆಂದು, ಅದರೆ 23.48 ಮೀಟರ್‌ನಷ್ಟು ಹೂಳು ಅಥವಾ ಸಣ್ಣಪುಟ್ಟ ಕಲ್ಲುಗಳು ಶೇಖರಣೆಯಾಗುವ ಸಂಭವ ಇರುವುದಿಲ್ಲವೆಂದು ವರದಿಯಲ್ಲಿ ತಿಳಿಸಲಾಗಿದೆ. ಅಪಾದಿತರು 23.48 ಮೀಟರ್ ಹೆಚ್ಚಿನ ಅಳತೆಯನ್ನು ಅಳತೆ ಪುಸ್ತಕದಲ್ಲಿ ನಮೂದಿಸಿ, ಕರ್ತವ್ಯ ಲೋಪವೆಸಗಿರುವುದು, ಹಣ ದುರುಪಯೋಗಪಡಿಸಿಕೊಂಡಿರುವುದಕ್ಕೆ ಸಾಕಷ್ಟು ಆಧಾರಗಳಿದ್ದು, ಸದರಿಯವರು ನೀಡಿರುವ ಉತ್ತರವು ಇಲಾಖಾ ವಿಚಾರಣೆಯನ್ನು ಕೈ ಬಿಡಲು ಸೂಕ್ತ ಸಮಾಧಾನಕರವಾಗಿರುವುದಿಲ್ಲವೆಂದು ಅಪಾಧಿತರು ಸರ್ಕಾರಿ ನೌಕರರಾಗಿದ್ದು, ಅವರ ಕಾರ್ಯನಿರ್ವಹಣೆಯಲ್ಲಿ ಪೂರ್ಣ ಪ್ರಮಾಣದ ಕರ್ತವ್ಯ ನಿಷ್ಠೆ ಹಾಗೂ ಪ್ರಾಮಾಣಿಕತೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿ ವರ್ತಿಸಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆಯೆಂದು ಇದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966 ನಿಯಮ **3(1)** ರ ಉಲ್ಲಂಘನೆಯಾಗಿದ್ದು, ಅಪಾದಿತರ ವಿರುದ್ಧ ವಿವರವಾದ ಇಲಾಖೆ ವಿಚಾರಣೆಯನ್ನು ಕೈಗೊಳ್ಳಲುಮ **ಪ್ರಕರಣವನ್ನು** ತಮಗೆ ವಹಿಸುವಂತೆ ಸರ್ಕಾರವನ್ನು ಕೋರಿರುತ್ತಾರೆ.

---2

ಮಾನ್ಯ ಉಪಲೋಕಾಯುಕ್ತರ ಕಲಂ 12(3) ರ ವರದಿಯನ್ನು ಹಾಗೂ ಇತರೆ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿರುತ್ತದೆ. ಪೊಲೀಸ್ ಅಧೀಕ್ಷಕರು ತನಿಖಾ ಸಂದರ್ಭದಲ್ಲಿ ಅಪಾದಿತ ನೌಕರ ಇನ್ನಿತರ ಅಧಿಕಾರಿಗಳ ಸಮಕ್ಷಮದಲ್ಲಿ ಆಕ್ಷೇಪಿತ ಕೊಳವೆ ಬಾವಿಯ ಪಂಪ್ ಹಾಗೂ ಮೋಟರ್ ಮೇಲೆತ್ತಿ ಕೊಳವೆ ಬಾವಿಯ ಆಳವನ್ನು ಯಂತ್ರದ ಮೂಲಕ ಅಳತೆ ಮಾಡಿದ್ದು, ಅಳತೆ ಪುಸ್ತಕದಲ್ಲಿ ನಮೂದಿಸಿದ ಅಳಕ್ಕೂ ವಾಸ್ತವವಾಗಿ ಇದ್ದ ಕೊಳವೆ ಬಾವಿಯ ಅಳಕ್ಕೂ 23.48 ಮೀಟರ್ ವ್ಯತ್ಯಾಸ ಇರುವುದು ಕಂಡು ಬಂದಿರುತ್ತದೆ. ಆರೋಪಿತರಾದ ಶ್ರೀ ಚಿಕ್ಕರಾಜಣ್ಣ, ಕಿರಿಯ ಇಂಜಿನಿಯರ್ ಇವರು ಅಳತೆ ಪುಸ್ತಕದಲ್ಲಿ 23.48 ಮೀಟರ್‌ನಷ್ಟು ಹೆಚ್ಚಿಗೆ ಕೊಳವೆ ಬಾವಿ ಕೊರೆದಿರುವುದಾಗಿ ತೋರಿಸಿ, ಹಣ ದುರುಪಯೋಗಪಡಿಸಿಕೊಂಡಿರುವ ಸಾಧ್ಯತೆಗಳು ಕಂಡು ಬಂದಿದ್ದು, ಸದರಿಯವರು ಅವರ ಕರ್ತವ್ಯ ನಿರ್ವಹಣೆಯಲ್ಲಿ ಪೂರ್ಣ ಪ್ರಮಾಣದ ಕರ್ತವ್ಯ ನಿಷ್ಠೆ, ಪ್ರಾಮಾಣಿಕತೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿ ವರ್ತಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ ಸದರಿಯವರ ವಿರುದ್ಧದ ಆರೋಪಗಳಿಗೆ ಸಂಬಂದಿಸಿದಂತೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವುದು ಸೂಕ್ತವೆಂದು ಸರ್ಕಾರವು ನಿರ್ಧರಿಸಿರುತ್ತದೆ.

**<u>ಆದೇಶ ಸಂಖ್ಯೆ:ಗ್ರಾಅಪ 62 ಇಎನ್‌ಕ್ಯೂ 17, ಬೆಂಗಳೂರು, ದಿನಾಂಕ:19.6.2017</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಶ್ರೀ ಚಿಕ್ಕರಾಜಣ್ಣ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಕನಕಪುರ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957 ರ ನಿಯಮ 11 ರ ಅನುಸಾರ ನಡೆಸಲು ಸದರಿ ನಿಯಮಗಳ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ರಂಗನಗೌಡ) 19/06/2017
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಇವರಿಗೆ:</u>

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಉಪ ನಿಬಂಧಕರು, ವಿಚಾರಣೆಗಳು-5, ಕರ್ನಾಟಕ ಲೋಕಾಯುಕ್ತ,ಬೆಂಗಳೂರು.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಮನಗರ
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು
7. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
8. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಮನಗರ ರವರ ಮುಖಾಂತರ)
9. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರು
10. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ /ಜಂಟಿ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು
11. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.